ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಗೋವಿಂದರಾಜು, ಶಾಸಕರು, ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಸಚಿವರ ಉತ್ತರ.

**ವಿಷಯ**: "ಸಮಗ್ರ ಶಿಶು ಅಭಿವೃದ್ಧಿ ಯೋಜನೆ, ಗರ್ಭಿಣಿ, ಬಾಣಂತಿಯರು, ಕಿಶೋರಿಯರು ಹಾಗೂ 6 ವರ್ಷದೊಳಗಿನ ಮಕ್ಕಳಿಗೆ ಪೌಷ್ಠಿಕ ಆಹಾರ ಪೂರೈಕೆ ಸೇರಿದಂತೆ ಆರೋಗ್ಯದ ಮೇಲೆ ನಿಗಾವಹಿಸಲು ಫಲಾನುಭವಿಗಳಿಗೆ ಫೇಸ್ ಕ್ಯಾಪ್ಚರ್ ಮೂಲಕ ಸರಬರಾಜು ಮಾಡುವಲ್ಲಿ ಆಗುತ್ತಿರುವ ತೊಂದರೆಗಳ ಬಗ್ಗೆ".

** ** **

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ, 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ, ಟಿ. ನರಸೀಪುರ ತಾಲ್ಲೂಕಿನಲ್ಲಿ 100 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷದ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ ಮತ್ತು ಕಿಶೋರಿಯರ ಸರ್ವತೋಮುಖ ಅಭಿವೃದ್ಧಿಯು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ರಾಜ್ಯದ 204 ಯೋಜನೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, 69922 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ರಾಜ್ಯದ ಅಂಗನವಾಡಿ ಕೇಂದ್ರಗಳಿಂದ ಗರ್ಭಿಣಿಯರಿಗೆ ಹಾಗೂ ಬಾಣಂತಿಯರಿಗೆ ಪೂರೈಕೆಯಾಗುತ್ತಿರುವ ಆಹಾರ ವ್ಯವಸ್ಥೆಗೆ ಮತ್ತಷ್ಟು ಪಾರದರ್ಶಕತೆ ತರಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯವು Face Recognition System ವ್ಯವಸ್ಥೆಯನ್ನು ಅನುಷ್ಠಾನಗೊಳಿಸಿದೆ.

Face Recognition System ಮೂಲಕ ನೋಂದಣಿಯಾದ ಮತ್ತು ಹಾಜರಾದ ಫಲಾನುಭವಿಗಳ ಆಧಾರದ ಮೇಲೆ ಕೇಂದ್ರ ಸರ್ಕಾರದ ವತಿಯಿಂದ ಅಕ್ಕಿ, ಗೋಧಿ ಹಂಚಿಕೆ ಹಾಗೂ ಪೂರಕ ಪೌಷ್ಠಿಕ ಆಹಾರ ಯೋಜನೆಗೆ ಅನುದಾನ ಬಿಡುಗಡೆ ಮಾಡಲಾಗುತ್ತದೆ. ಈ ತಂತ್ರಾಂಶದ ಮೂಲಕ ಕಾರ್ಯ ನಿರ್ವಹಿಸುವ ರಾಜ್ಯಗಳಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರಸ್ತುತ ಶೇ.94.2 ರಷ್ಟು ಫಲಾನುಭವಿಗಳನ್ನು Face Recognition System ಮೂಲಕ ನೋಂದಣಿ ಮಾಡುವ ಮೂಲಕ ದೇಶದಲ್ಲಿ ಕರ್ನಾಟಕ ರಾಜ್ಯ 2ನೇ ಸ್ಥಾನ ಪಡೆದಿದೆ.

**FRS ತಂತ್ರಾಂಶದ ಕಾರ್ಯವೈಖರಿ:**

- ಸ್ಥಳೀಯ ಅಂಗನವಾಡಿ ಕೇಂದ್ರಗಳಲ್ಲಿ ನೋಂದಣಿ ಮಾಡಿಕೊಂಡ ಗರ್ಭಿಣಿ, ಬಾಣಂತಿಯರಿಗೆ ಹಾಗೂ 6 ತಿಂಗಳಿಂದ 03 ವರ್ಷದವರೆಗಿನ ಮಕ್ಕಳಿಗೆ ಮನೆಗೆ ಪೂರಕ ಪೌಷ್ಠಿಕ ಆಹಾರ ಪೂರೈಕೆ ಮಾಡಲಾಗುತ್ತದೆ.
- ಮನೆಗೆ ಆಹಾರ ಪಡೆಯುವ ಫಲಾನುಭವಿಗಳು ಮೊದಲಿಗೆ ಪೋಷಣ್ ಟ್ರ್ಯಾಕರ್‌ನಲ್ಲಿ ನೋಂದಣಿ ಮಾಡಿಕೊಳ್ಳಬೇಕು.
- ನೋಂದಣಿಯಾದ ಫಲಾನುಭವಿಯ Profile ನಲ್ಲಿ Photo Capture ಮಾಡಲಾಗುತ್ತದೆ.
- ನಂತರ ಫಲಾನುಭವಿಯ ಆಧಾರ್ ಕಾರ್ಡ್‌ಗೆ ಮೊಬೈಲ್ ಸಂಖ್ಯೆ ಜೋಡಣೆ, ಇ-ಕೆವೈಸಿ ಮಾಡಲಾಗುತ್ತದೆ.
- ಪ್ರತಿ ತಿಂಗಳು ಈಗಾಗಲೇ ಸೆರೆ ಹಿಡಿಯಲಾದ ಫಲಾನುಭವಿಗಳ Photoವನ್ನು ಹೋಲಿಕೆ ಮಾಡಿ ಪೋಷಣ್ ಟ್ರ್ಯಾಕರ್‌ನಲ್ಲಿ ಅಳವಡಿಸಿ ಮನೆಗೆ ಆಹಾರ ವಿತರಿಸಲಾಗುತ್ತಿದೆ.
- ಆಹಾರ ವಿತರಣೆಯಾದ ಬಳಿಕ ಫಲಾನುಭವಿಗಳ ಮೊಬೈಲ್‌ಗೆ ಸ್ವೀಕೃತಿಯ ಮೆಸೇಜ್ ರವಾನೆಯಾಗುತ್ತದೆ.
- ಇದರಿಂದ ನಕಲಿ ಫಲಾನುಭವಿಗಳು ಆಹಾರ ತೆಗೆದುಕೊಳ್ಳುವುದನ್ನು ಹಾಗೂ ನೋಂದಣಿಯಾಗದೆ ಆಹಾರ ಪಡೆಯಲು ಬರುವ ಅನರ್ಹ ಫಲಾನುಭವಿಗಳ ಪತ್ತೆಗೂ ಇದು ಸಹಕಾರಿಯಾಗಲಿದೆ.

**FRS ತಂತ್ರಾಂಶದಲ್ಲಿ ಎದುರುಸುತ್ತಿರುವ ತೊಂದರೆಗಳ ಬಗ್ಗೆ :**

- ಉಳಿದ ಶೇ.6 ಫಲಾನುಭವಿಗಳನ್ನು Face Recognition System ಮೂಲಕ ನೋಂದಣಿ ಮಾಡಲು ಕರಾವಳಿ ಭಾಗದ ಅಂಗನವಾಡಿ ಕೇಂದ್ರಗಳಲ್ಲಿ ನೆಟ್‌ವರ್ಕ್ ಸಮಸ್ಯೆಯನ್ನು ಎದುರಿಸಲಾಗುತ್ತಿದೆ.
- ಫಲಾನುಭವಿಗಳ ಆಧಾರ್‌ಸಂಖ್ಯೆಗೆ ಮೊಬೈಲ್ ಸಂಖ್ಯೆ ಲಿಂಕ್ ಆಗದೇ ಇರುವುದರಿಂದ ಫಲಾನುಭವಿಗಳನ್ನು FRS ಮೂಲಕ ನೋಂದಣಿಗೆ ಸಮಸ್ಯೆಯನ್ನು ಎದುರಿಸಲಾಗುತ್ತಿದೆ.
- ವಲಸೆ ಮೂಲಕ ಬಂದಂತಹ ಫಲಾನುಭವಿಗಳ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆ ಲಿಂಕ್ ಇರುವುದಿಲ್ಲ ಹಾಗೂ ಈ ಫಲಾನುಭವಿಗಳು ಅಂಗನವಾಡಿ ಕೇಂದ್ರಗಳಲ್ಲಿ ನೋಂದಣಿಯಾಗಿ ಬೇರೆ ಕಡೆ ವಲಸೆ ಹೋಗಿರುವುದರಿಂದ ಈ ಫಲಾನುಭವಿಗಳನ್ನು ಟ್ರ್ಯಾಕ್ ಮಾಡಲು ಸಮಸ್ಯೆಗಳನ್ನು ಎದುರಿಸಲಾಗುತ್ತಿದೆ.

ದೇಶದಲ್ಲಿಯೇ ಪ್ರ ಪ್ರಥಮ ಬಾರಿಗೆ ಐಸಿಡಿಎಸ್.ಯೋಜನೆಯಡಿ ಪಾರದರ್ಶಕತೆಯನ್ನು ತರಲು Face Recognition System ನ್ನು ಜಾರಿಗೆ ತರಲಾಗಿದ್ದು, ಪ್ರಸ್ತುತ ಜಾರಿಯಾಗಿ 03 ತಿಂಗಳಾಗಿರುವ ಕಾರಣ ಕಂಡು ಬಂದಿರುವ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಲು ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಿ, ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

**ಸಂಖ್ಯೆ: ಮಮಇ 210 ಐಸಿಡಿ 2025**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.